**Akashvani : Bangalore**
**Regional Bulletin In Kannada**
**09.09.2026 / 18.40 hrs**

**ಆಕಾಶವಾಣಿ ಬೆಂಗಳೂರು**

**ಪ್ರದೇಶ ಸಮಾಚಾರ**

**09.09.2026 / 18.40 hrs**

---

ಮುಖ್ಯಾಂಶಗಳು

೧. ಕರ್ನಾಟಕ ಏರೋಸ್ಪೇಸ್ ನೀತಿ, ವಿದ್ಯಾರ್ಥಿ ಸಂಘದ ಚುನಾವಣೆಗೆ ರಾಜ್ಯ ಸಚಿವ ಸಂಪುಟ ಸಭೆ ಅನುಮೋದನೆ

೨. ರಾಜ್ಯದ ರೈಲು ಜಾಲಕ್ಕೆ ಹೊಸ ಬಲ ; ವೈಟ್‌ಫೀಲ್ಡ್-ಬಂಗಾರಪೇಟೆ, ಹೊಸೂರು-ಓಮಲೂರು ಡಬ್ಲಿಂಗ್ ಯೋಜನೆಗೆ ಕೇಂದ್ರ ಅಸ್ತು

೩. ಮುಖ್ಯಮಂತ್ರಿಯಾಗಿ ಡಿ.ಕೆ.ಶಿವಕುಮಾರ್ ಆಡಳಿತಕ್ಕೆ ೧೦೦ ದಿನದ ಸಂಭ್ರಮ ; ನಾಳೆ ಗ್ಯಾರಂಟಿ ಫಲಾನುಭವಿಗಳ ಜೊತೆ ಸಂವಾದ

೪. ಭದ್ರಾ ಮೇಲ್ದಂಡೆ ಯೋಜನೆಯ ಪ್ರಾಯೋಗಿಕ ಪರೀಕ್ಷೆ ಯಶಸ್ವಿ ; ೧೪೪ ಕಿಲೋಮೀಟರ್ ಕ್ರಮಿಸಿ ಚಿತ್ರದುರ್ಗದ ಗೋನೂರು ಕೆರೆಗೆ ಹರಿದ ನೀರು

೫. ಬರ ನಿರ್ವಹಣೆ ಕೈಪಿಡಿ ಬದಲಾಯಿಸಲು ಕೇಂದ್ರ ಸರ್ಕಾರಕ್ಕೆ ಪತ್ರ ಬರೆಯುವಂತೆ ಸಚಿವ ಈಶ್ವರ್ ಖಂಡ್ರೆ ಸರ್ಕಾರಕ್ಕೆ ಸಲಹೆ

---

ರಾಜ್ಯದಲ್ಲಿ ೩೭ ವರ್ಷಗಳ ಬಳಿಕ ಕಾಲೇಜು, ವಿಶ್ವವಿದ್ಯಾಲಯಗಳಲ್ಲಿ ವಿದ್ಯಾರ್ಥಿ ಸಂಘ ಚುನಾವಣೆ ಮರು ಜಾರಿಗೊಳಿಸಲು ಸರ್ಕಾರ ತೀರ್ಮಾನಿಸಿದೆ. ಇಂದು ಮುಖ್ಯಮಂತ್ರಿ ಅಧ್ಯಕ್ಷತೆಯಲ್ಲಿ ನಡೆದ ಸಂಪುಟ ಸಭೆಯಲ್ಲಿ ಈ ಹಿಂದಿನ ನಿಷೇಧ ತೆರವುಗೊಳಿಸಿ ಚುನಾವಣೆ ನಡೆಸಲು ಅನುಮತಿ ನೀಡಲಾಗಿದೆ.

ಈ ಕುರಿತಂತೆ ಸುದ್ದಿಗಾರರಿಗೆ ಮಾಹಿತಿ ನೀಡಿದ ಉಪಮುಖ್ಯಮಂತ್ರಿ ಡಾ.ಜಿಪರಮೇಶ್ವರ್ ಕರ್ನಾಟಕ ಏರೋಸ್ಪೇಸ್ ಪಾಲಿಸಿ-೨೦೨೬-೨೦೩೧ಕ್ಕೂ ಸಚಿವ ಸಂಪುಟ ಅನುಮೋದನೆ ನೀಡಿದೆ. ಸರ್ಕಾರ ಹಾಗೂ ಖಾಸಗಿ ಸಹಭಾಗಿತ್ವದಲ್ಲಿ ಏರೋಸ್ಪೇಸ್, ರಕ್ಷಣೆ, ವಿಮಾನಯಾನ ಕ್ಷೇತ್ರದ ಉತ್ಪಾದನೆ, ನಾವೀನ್ಯತೆ ಕ್ಷೇತ್ರದಲ್ಲಿ ಬೆಂಗಳೂರನ್ನು ಕೇಂದ್ರವನ್ನಾಗಿ ಸ್ಥಾಪಿಸಲಾಗುವುದು

ಎಂದು ತಿಳಿಸಿದ್ದಾರೆ. ಹಂತ ಹಂತವಾಗಿ ೭೦ ಸಾವಿರ ಕೋಟಿ ಬಂಡವಾಳ ಹೂಡಿಕೆಗೆ ನಿರ್ಧರಿಸಲಾಗಿದ್ದು, ರಾಜ್ಯದಲ್ಲಿ ೭೦ ಸಾವಿರ ಉದ್ಯೋಗಸೃಷ್ಟಿಯ ಗುರಿ ಹೊಂದಲಾಗಿದೆ ಎಂದು ಸ್ಪಷ್ಟಪಡಿಸಿದ್ದಾರೆ.

ಹೆಚ್.ಎ.ಎಲ್.ನಲ್ಲಿ ೪೦ ವಿಮಾನ ಉತ್ಪಾದನೆ ಮಾಡುವ ಯೋಜನೆಯಿದ್ದು, ಸಬ್ಸಿಡಿ ರೂಪದಲ್ಲಿ ಸಹಾಯ ಮಾಡಲು ಸರ್ಕಾರ ನಿರ್ಧರಿಸಿದೆ ಎಂದು ಹೇಳಿದ್ದಾರೆ.

ಮುಖ್ಯಮಂತ್ರಿ ನೇಗಿಲಯೋಗಿ ಯೋಜನೆಯನ್ನು ಮೊದಲ ಹಂತದಲ್ಲಿ ೨೧ ತಾಲೂಕುಗಳಲ್ಲಿ ಜಾರಿಗೊಳಿಸಲು ನಿರ್ಧರಿಸಲಾಗಿದೆ. ಬೆಂಗಳೂರಿನ ಎಲೆಕ್ಟ್ರಾನಿಕ್ಸ್ ಸಿಟಿಯಲ್ಲಿ ಕೃತಕಬುದ್ಧಿಮತ್ತೆ ವಿಶ್ವವಿದ್ಯಾಲಯ ತೆರೆಯಲು ತೀರ್ಮಾನಿಸಲಾಗಿದೆ ಎಂದು ಉಪಮುಖ್ಯಮಂತ್ರಿ ಮಾಹಿತಿ ನೀಡಿದ್ದಾರೆ.

---

ಪ್ರಧಾನಿ ನರೇಂದ್ರ ಮೋದಿ ಅಧ್ಯಕ್ಷತೆಯಲ್ಲಿ ನಡೆದ ಆರ್ಥಿಕ ವ್ಯವಹಾರಗಳ ಸಚಿವ ಸಂಪುಟ ಸಮಿತಿಯು ೧೦ ಸಾವಿರದ ೨೧ ಕೋಟಿ ರೂಪಾಯಿ ಹೂಡಿಕೆಯ ಐದು ಬಹುಹಳಿ ರೈಲ್ವೆ ಯೋಜನೆಗಳಿಗೆ ಅನುಮೋದನೆ ನೀಡಿದೆ.

ತಮಿಳುನಾಡು, ಆಂಧ್ರಪ್ರದೇಶ, ಕರ್ನಾಟಕ ಮತ್ತು ತೆಲಂಗಾಣದಾದ್ಯಂತ ೧೭ ಜಿಲ್ಲೆಗಳನ್ನು ಒಳಗೊಂಡ ಈ ಐದು ಯೋಜನೆಗಳು ಭಾರತೀಯ ರೈಲ್ವೆಯ ಅಸ್ತಿತ್ವದಲ್ಲಿರುವ ಜಾಲವನ್ನು ಸುಮಾರು ೫೪೦ ಕಿಲೋಮೀಟರ್‌ಗಳಷ್ಟು ಹೆಚ್ಚಿಸಲಿದೆ.

ಈ ರೈಲ್ವೆ ಯೋಜನೆಯಲ್ಲಿ ೪೭ ಕಿಲೋಮೀಟರ್ ಉದ್ದದ ವೈಟ್‌ಫೀಲ್ಡ್-ಬಂಗಾರಪೇಟೆ, ೧೪೭ ಕಿಲೋಮೀಟರ್ ಉದ್ದದ ಹೊಸೂರು-ಓಮಲೂರು ಡಬ್ಲಿಂಗ್ ಯೋಜನೆಗೆ ಅನುಮೋದನೆ ನೀಡಲಾಗಿದೆ.

ಅನುಮೋದಿತ ಈ ಯೋಜನೆಯಿಂದ ರಾಜ್ಯದ ಕೋಟಿ ಲಿಂಗೇಶ್ವರ, ಬಂಗಾರು ತಿರುಪತಿ, ಕೋಲಾರ ಚಿನ್ನದಗಣಿ, ಹೊಗೇನಕಲ್ ಜಲಪಾತ ಸೇರಿದಂತೆ ರಾಜ್ಯದ ಹಲವಾರು ಪ್ರಮುಖ ಪ್ರವಾಸಿ ತಾಣಗಳಿಗೆ ಸಂಪರ್ಕವನ್ನು ಸುಧಾರಿಸಲಿದೆ. ಕಲ್ಲಿದ್ದಲು, ಸಿಮೆಂಟ್, ಆಹಾರ ಧಾನ್ಯಗಳು, ಪೆಟ್ರೋಲಿಯಂ ಉತ್ಪನ್ನಗಳು, ರಸಗೊಬ್ಬರಗಳ ಸರಕು ಸಾಗಾಣೆಗೂ ಇದು ಸಹಾಯಕವಾಗಲಿದೆ.

---

ಮುಖ್ಯಮಂತ್ರಿ ಡಿ.ಕೆ.ಶಿವಕುಮಾರ್ ನೇತೃತ್ವದ ಆಡಳಿತವು ೧೦೦ ದಿನಗಳನ್ನು ಯಶಸ್ವಿಯಾಗಿ ಪೂರೈಸಿದ ಹಿನ್ನೆಲೆಯಲ್ಲಿ, "ದೃಢ ಕರ್ನಾಟಕದ ಸಂಕಲ್ಪ - ಶತಕದ ಪಥ, ಪ್ರಗತಿಯ ರಥ" ಎಂಬ ವಿಶೇಷ ಕಾರ್ಯಕ್ರಮವನ್ನು ನಾಳೆ ವಿಧಾನಸೌಧದಲ್ಲಿ ಆಯೋಜಿಸಲಾಗಿದೆ.

ಮಾಜಿ ಮುಖ್ಯಮಂತ್ರಿ ಸಿದ್ದರಾಮಯ್ಯ ಕಾರ್ಯಕ್ರಮವನ್ನು ಉದ್ಘಾಟಿಸಲಿದ್ದಾರೆ. ಸರ್ಕಾರದ ಐದು ಪ್ರಮುಖ ಗ್ಯಾರಂಟಿ ಯೋಜನೆಗಳಾದ ಅನ್ನಭಾಗ್ಯ, ಗೃಹಲಕ್ಷ್ಮಿ, ಶಕ್ತಿ, ಯುವನಿಧಿ, ಗೃಹಜ್ಯೋತಿ ಯೋಜನೆ ಹಾಗೂ ವಿವಿಧ ಕ್ಷೇತ್ರದ ಕಾರ್ಮಿಕರನ್ನು ಒಳಗೊಂಡಂತೆ ಸಮಾಜದ ವಿವಿಧ ವರ್ಗಗಳ ಫಲಾನುಭವಿಗಳು ಈ ಕಾರ್ಯಕ್ರಮದಲ್ಲಿ ಭಾಗವಹಿಸಲಿದ್ದಾರೆ. ಅವರೊಂದಿಗೆ ನಾಳೆ ಮುಖ್ಯಮಂತ್ರಿ ಸಂವಾದ ನಡೆಸಲಿದ್ದಾರೆ.

---

ಲೋಕೋಪಯೋಗಿ ಸಚಿವ ಸತೀಶ್ ಜಾರಕಿಹೊಳಿ ನಿವಾಸಗಳ ಮೇಲೆ ಇಡಿ ಅಧಿಕಾರಿಗಳು ದಾಳಿ ನಡೆಸಿದ್ದು, ಹಣಕಾಸು ಅವ್ಯವಹಾರ ಮತ್ತು ವಿದೇಶಿ ಹೂಡಿಕೆಗಳ ತನಿಖೆಗೆ ಸಂಬಂಧಿಸಿದಂತೆ ೯ ಗಂಟೆಗಳ ಕಾಲ ಶೋಧ ನಡೆಸಿದ್ದಾರೆ.

ಸತೀಶ್ ಜಾರಕಿಹೊಳಿ ಪುತ್ರ ರಾಹುಲ್, ಪುತ್ರಿ ಪ್ರಿಯಾಂಕ ಹಾಗೂ ಅವರ ಅತ್ಯಾಪ್ತರ ನಿವಾಸದ ಮೇಲೂ ದಾಳಿ ನಡೆಸಿ ಇಡಿ ಅಧಿಕಾರಿಗಳು ಮಹತ್ವದ ದಾಖಲೆಗಳನ್ನು ವಶಪಡಿಸಿಕೊಂಡಿದ್ದಾರೆ.

ಶೋಧದ ವೇಳೆ ಅಧಿಕಾರಿಗಳು ಸತೀಶ್ ಜಾರಕಿಹೊಳಿ ಅವರನ್ನು ವಿಚಾರಣೆ ನಡೆಸಿ ಹೇಳಿಕೆ ದಾಖಲಿಸಿಕೊಂಡಿದ್ದಾರೆ ಎಂದು ಐಎಎನ್ಎಸ್ ಸುದ್ದಿಸಂಸ್ಥೆ ವರದಿ ಮಾಡಿದೆ.

ತನಿಖೆಯಲ್ಲಿ ಸಾಗರೋತ್ತರ ಹೂಡಿಕೆಯ ಕುರಿತಂತೆ ಪರಿಶೀಲನೆ ನಡೆಸಲಾಗುತ್ತಿದೆ. ಎರಡು ವರ್ಷಗಳ ಹಿಂದೆ ಬೆಳಗಾವಿಯ ಸತೀಶ್ ಜಾರಕಿಹೊಳಿ ನಿವಾಸ ಹಾಗೂ ಸಕ್ಕರೆ ಕಾರ್ಖಾನೆಗಳಿಗೆ ಆಗಮಿಸಿದ್ದ ರುವಾಂಡ ನಿಯೋಗದ ಕುರಿತಂತೆಯೂ ಪರಿಶೀಲನೆ ನಡೆಯುತ್ತಿದೆ.

ಈ ನಡುವೆ ಬೆಂಗಳೂರಿನಲ್ಲಿ ಜಾರಕಿಹೊಳಿ ಬೆಂಬಲಿಗರು ಅವರ ನಿವಾಸ ಹೊರಗೆ ಜಮಾಯಿಸಿ ಬಿತ್ತಿಪತ್ರಗಳನ್ನು ಹಿಡಿದು ಇಡಿ ವಿರುದ್ಧ ಘೋಷಣೆಗಳನ್ನು ಕೂಗಿದರು.

---

ಲೋಕೋಪಯೋಗಿ ಸಚಿವ ಸತೀಶ್ ಜಾರಕಿಹೊಳಿ ನಿವಾಸ ಮತ್ತು ಆಸ್ತಿಗಳ ಮೇಲೆ ಇಡಿ ದಾಳಿ ನಡೆಸಿರುವ ಬಗ್ಗೆ ರಾಜಕೀಯ ಪ್ರೇರಿತ ಎಂದಿರುವ ಕಾಂಗ್ರೆಸ್ ವಿರುದ್ಧ ಬಿಜೆಪಿ ವಾಗ್ದಾಳಿ ನಡೆಸಿದೆ.

ಈ ಕುರಿತಂತೆ ಪ್ರತಿಕ್ರಿಯಿಸಿರುವ ಬಿಜೆಪಿ ರಾಜ್ಯಾಧ್ಯಕ್ಷ ಬಿ.ವೈ.ವಿಜಯೇಂದ್ರ ರಾಜಕೀಯ ಪ್ರೇರಿತ ಎಂಬ ಆರೋಪಗಳನ್ನು ತಳ್ಳಿ ಹಾಕಿದ್ದಾರೆ. ತನಿಖೆಯಿಂದ ಯಾವ ಮಾಹಿತಿ ಹೊರ ಬರಲಿದೆ ಎಂಬುದನ್ನು ಬಿಜೆಪಿ ಕಾಯುತ್ತಿದೆ ಎಂದು ಹೇಳಿದ್ದಾರೆ.

ಇಡಿ ದಾಳಿಯು ಆಪಾದಿತ, ಆರ್ಥಿಕ ಅಕ್ರಮಗಳ ತನಿಖೆಯ ಭಾಗವಾಗಿದೆ ಎಂದು ಅವರು ತಿಳಿಸಿದ್ದಾರೆ.

---

ಬರಪೀಡಿತ ಚಿತ್ರದುರ್ಗ ಜಿಲ್ಲೆಯ ಜನರ ಮೂರು ದಶಕಗಳ ಸುದೀರ್ಘ ಹೋರಾಟಕ್ಕೆ ಇಂದು ಐತಿಹಾಸಿಕ ಜಯ ಸಿಕ್ಕಿದೆ. ಮಧ್ಯ ಕರ್ನಾಟಕದ ಜೀವನಾಡಿ ಭದ್ರಾ ಮೇಲ್ದಂಡೆ ಯೋಜನೆಯ ಪ್ರಾಯೋಗಿಕ ಪರೀಕ್ಷೆ ಯಶಸ್ವಿಯಾಗಿದ್ದು, ಭದ್ರಾ ಜಲಾಶಯದಿಂದ ಬರೋಬ್ಬರಿ ೧೪೪ ಕಿಲೋಮೀಟರ್‌ಗಳಷ್ಟು ದೂರ ಕಾಲುವೆಯಲ್ಲಿ ಹರಿದುಬಂದ ನೀರು ಇಂದು ಗೋನೂರು ಕೆರೆ ತಲುಪಿದೆ.

ಜಿಲ್ಲೆಗೆ ಭದ್ರೆ ಆಗಮಿಸುತ್ತಿದ್ದಂತೆ ಗೋನೂರು ಕೆರೆ ಆವರಣದಲ್ಲಿ ನೆರೆದಿದ್ದ ಜನರಿಂದ ಹರ್ಷೋದ್ಗಾರ ಮುಗಿಲುಮುಟ್ಟಿತ್ತು. ವರ್ಷಗಳಿಂದ ಒಣಗಿ ಬರಿದಾಗಿದ್ದ ಕೆರೆಗೆ ಜೀವಕಳೆ ಬಂದಿದ್ದನ್ನು ಕಂಡು ಭಾವುಕರಾದ ಜನಸ್ತೋಮ, ಕಾಲುವೆಯತ್ತ ಧಾವಿಸಿ ಹರಿಯುವ ನೀರನ್ನು ಕಣ್ತುಂಬಿಕೊಂಡರು.

ಜಿಲ್ಲಾ ನೀರಾವರಿ ಅನುಷ್ಠಾನ ಹೋರಾಟ ಸಮಿತಿ ಹಾಗೂ ರೈತ ಸಂಘದ ನೇತೃತ್ವದಲ್ಲಿ ಭದ್ರಾ ನೀರಿಗೆ ಬಾಗಿನ ಅರ್ಪಿಸಲಾಯಿತು. ಹಲವು ಮಠಾಧೀಶರು ಭಾಗವಹಿಸಿ ವಿಶೇಷ ಪೂಜೆ ನೆರವೇರಿಸಿದರು.

ಈ ಯೋಜನೆಯಿಂದಾಗಿ ತುಂಗಾ ಮತ್ತು ಭದ್ರಾ ನದಿಗಳಿಂದ ಒಟ್ಟು ೨೯.೯ ಟಿ.ಎಂ.ಸಿ ನೀರು ಹಂಚಿಕೆಯಾಗಿದ್ದು, ೨.೨೫ ಲಕ್ಷ ಹೆಕ್ಟೇರ್ ಕೃಷಿ ಭೂಮಿಗೆ ನೀರಾವರಿ ಹಾಗೂ ೩೬೭ ಕೆರೆಗಳನ್ನು ತುಂಬಿಸುವ ಬೃಹತ್ ಗುರಿ ಹೊಂದಲಾಗಿದೆ.

---

ಬರಪೀಡಿತ ಘೋಷಣೆಗಾಗಿ ಕೇಂದ್ರ ಸರ್ಕಾರ ರೂಪಿಸಿರುವ ಬರ ನಿರ್ವಹಣೆ, ಕೈಪಿಡಿಯ ನಿಯಮಾವಳಿಗಳು, ಅಸಮರ್ಪಕವಾಗಿದ್ದು, ಇದನ್ನು ಬದಲಾಯಿಸುವಂತೆ ಒತ್ತಾಯಿಸಿ ಕೇಂದ್ರ

ಸರ್ಕಾರಕ್ಕೆ ಪತ್ರ ಬರೆಯಬೇಕು ಎಂದು ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಸಚಿವ ಈಶ್ವರ್ ಬಿ. ಖಂಡ್ರೆ ಸಲಹೆ ನೀಡಿದ್ದಾರೆ.

ಕಂದಾಯ ಸಚಿವ ಹಾಗೂ ಉಪಮುಖ್ಯಮಂತ್ರಿ ಡಾ.ಜಿ.ಪರಮೇಶ್ವರ್ ಅಧ್ಯಕ್ಷತೆಯಲ್ಲಿ ನಡೆದ ಸಚಿವ ಸಂಪುಟದ ಉಪಸಮಿತಿ ಸಭೆಯಲ್ಲಿ ಅವರು ಈ ಸಲಹೆ ನೀಡಿದ್ದಾರೆ.

ಈ ಬಗ್ಗೆ ಈಗಾಗಲೇ ಹಲವು ಬಾರಿ ಕೇಂದ್ರ ಸರ್ಕಾರಕ್ಕೆ ಮನವಿ ಮಾಡಿದ್ದರೂ ಪರಿಗಣನೆಗೆ ತೆಗೆದುಕೊಂಡಿಲ್ಲ. ಈ ಹಿನ್ನೆಲೆಯಲ್ಲಿ ಅಂಶವಾರು ಬದಲಾವಣೆಗೆ ಪತ್ರ ಬರೆದು ಒತ್ತಾಯಿಸಬೇಕು ಎಂದು ಆಗ್ರಹಿಸಿದ್ದಾರೆ.

---

ಕಸ್ತೂರಿರಂಗನ್ ಜಾರಿ ವಿರೋಧಿಸಿ ಇದೆ ೧೧ರಂದು ಶಿವಮೊಗ್ಗದ ಈಸೂರಿನಿಂದ ಶಿಕಾರಿಪುರದವರೆಗೆ ಪಾದಯಾತ್ರೆ ನಡೆಯಲಿದೆ. ಈ ಕುರಿತಂತೆ ಮಾಹಿತಿ ನೀಡಿರುವ ಸಚಿವ ಮಧುಬಂಗಾರಪ್ಪ ಕಸ್ತೂರಿ ರಂಗನ್ ವರದಿಯನ್ನು ಯಾವುದೇ ಕಾರಣಕ್ಕೂ ಜಾರಿ ಮಾಡಲು ಅವಕಾಶ ನೀಡುವುದಿಲ್ಲ ಎಂದು ತಿಳಿಸಿದ್ದಾರೆ.

ಮಲೆನಾಡಿನ ರೈತರು, ಕೃಷಿ, ಪರಿಸರ ಹಾಗೂ ಜನರ ಬದುಕನ್ನು ರಕ್ಷಿಸುವುದು ಸರ್ಕಾರದ ಪ್ರಮುಖ ಗುರಿಯಾಗಿದೆ. ಪಾದಯಾತ್ರೆಯಲ್ಲಿ ಪಕ್ಷಾತೀತವಾಗಿ ಜನರು ಭಾಗವಹಿಸಿ ಕೇಂದ್ರ ಸರ್ಕಾರಕ್ಕೆ ಎಚ್ಚರಿಕೆ ನೀಡುವಂತೆ ಕರೆ ನೀಡಿದ್ದಾರೆ.

ಕಸ್ತೂರಿರಂಗನ್ ವರದಿ ಜಾರಿಯಾದರೆ ಪಶ್ಚಿಮಘಟ್ಟ ವ್ಯಾಪ್ತಿಯ ೧ ಸಾವಿರದ ೫೭೬ ಗ್ರಾಮಗಳ ರೈತರ ಬದುಕು ಅತಂತ್ರವಾಗಲಿದೆ. ಶಿವಮೊಗ್ಗ ಜಿಲ್ಲೆಯೊಂದರಲ್ಲೇ ೪೮೪ ಗ್ರಾಮಗಳ ಜನರ ಬದುಕಿನ ಮೇಲೆ ಪರಿಣಾಮ ಬೀರಲಿದೆ ಎಂದು ಹೇಳಿದ್ದಾರೆ.

ಕಸ್ತೂರಿರಂಗನ್ ವರದಿ ಜಾರಿ ಕುರಿತಂತೆ ಬಿಜೆಪಿ ತಮ್ಮ ನಿಲುವು ಸ್ಪಷ್ಟಪಡಿಸಲಿ ಎಂದು ಆಗ್ರಹಿಸಿದ್ದಾರೆ.

---

ಕರ್ನಾಟಕ ದೇಶದಲ್ಲಿ ವೇಗವಾಗಿ ನಗರೀಕರಣಗೊಳ್ಳುತ್ತಿರುವ ಹಾಗೂ ಆರ್ಥಿಕವಾಗಿ ಅತ್ಯಂತ ಕ್ರೀಯಾಶೀಲ ರಾಜ್ಯಗಳಲ್ಲಿ ಒಂದಾಗಿದೆ ಎಂದು ನಗರಾಭಿವೃದ್ಧಿ ಸಚಿವ ಯತೀಂದ್ರ ಸಿದ್ದರಾಮಯ್ಯ ತಿಳಿಸಿದ್ದಾರೆ.

ಬೆಂಗಳೂರಿನಲ್ಲಿಂದು ನಡೆದ ಕರ್ನಾಟಕ ನಗರ ಮೂಲಸೌಕರ್ಯ ಅಭಿವೃದ್ಧಿ ಮತ್ತು ಹಣಕಾಸು ನಿಗಮದ ಸಹಯೋಗದಲ್ಲಿ ಆಯೋಜಿಸಲಾಗಿದ್ದ ಶೃಂಗಸಭೆ ಉದ್ಘಾಟಿಸಿ ಮಾತನಾಡಿದ ಅವರು, ಬೆಂಗಳೂರಿನ ಜೊತೆಗೆ ಮೈಸೂರು, ಮಂಗಳೂರು, ಹುಬ್ಬಳ್ಳಿ-ಧಾರವಾಡ, ತುಮಕೂರು ಸೇರಿದಂತೆ ರಾಜ್ಯದ ವಿವಿಧ ನಗರಗಳು ಪ್ರಾದೇಶಿಕ, ಆರ್ಥಿಕ ಬೆಳವಣಿಗೆಯ ಪ್ರಮುಖ ಕೇಂದ್ರಗಳಾಗಿ ಹೊರಹೊಮ್ಮುತ್ತಿವೆ ಎಂದು ಹೇಳಿದ್ದಾರೆ.

---

ಜಿಬಿಎ ವ್ಯಾಪ್ತಿಯಲ್ಲಿ ಸಾರ್ವಜನಿಕ ದೂರುಗಳ ಪರಿಹಾರ ವ್ಯವಸ್ಥೆಯನ್ನು ಮತ್ತಷ್ಟು ಜನಸ್ನೇಹಿ ಪಾರದರ್ಶಕ ಹಾಗೂ ಪರಿಣಾಮಕಾರಿಗೊಳಿಸುವ ಉದ್ದೇಶದಿಂದ ಸಹಾಯ ೩.೦ ತಂತ್ರಾಂಶವನ್ನು ಅಭಿವೃದ್ಧಿಪಡಿಸಲಾಗುತ್ತಿದೆ ಎಂದು ಗ್ರೇಟರ್ ಬೆಂಗಳೂರು ಅಭಿವೃದ್ಧಿ ಸಚಿವ ಕೃಷ್ಣಬೈರೇಗೌಡ ತಿಳಿಸಿದ್ದಾರೆ.

ಬೆಂಗಳೂರಿನಲ್ಲಿಂದು ನಾಗರಿಕರೊಂದಿಗೆ ನಡೆದ ಸಮಾಲೋಚನಾ ಸಭೆ ಉದ್ದೇಶಿಸಿ ಮಾತನಾಡಿದ ಅವರು, ರಸ್ತೆ ಗುಂಡಿ, ಬೀದಿದೀಪದಂತಹ ಸಮಸ್ಯೆ ಹಾಗೂ ರಸ್ತೆ ಅಭಿವೃದ್ಧಿ ಕಾಮಗಾರಿಗಳನ್ನು ಕೈಗೆತ್ತಿಕೊಳ್ಳಲು ಬೇರೆ ಬೇರೆ ತಂತ್ರಾಂಶಗಳ ಅಗತ್ಯವಿಲ್ಲ. ಒಂದೇ ತಂತ್ರಾಂಶದ ಮೂಲಕ ಎಲ್ಲ ಪ್ರಕ್ರಿಯೆಗಳನ್ನು ಕೈಗೊಳ್ಳುವಂತಿರಬೇಕು ಎಂದು ಅಭಿಪ್ರಾಯಪಟ್ಟಿದ್ದಾರೆ.

__________ ಮುಕ್ತಾಯ ___________